# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರೈತ ಸಂಪರ್ಕ ಕೇಂದ್ರಗಳ ನಿರ್ವಹಣಾ ವೆಚ್ಚವನ್ನು ರೂ. 25.000/- ದಿಂದ ರೂ. 50.000/- ಗೆ ಹೆಚ್ಚಿಸುವ ಬಗ್ಗೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/113/ಕೃಇಕ/2012, ಬೆಂಗಳೂರು,**
**ದಿ: 18/03/2013.**

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಕೃತೋಇ/116/ಕೃಯೋಕಾ/2001, ದಿ: 17/05/2001.

2) ಕೃಷಿ ಇಲಾಖೆಯ ಏಕ ಕಡತ ಸಂಖ್ಯೆ: ರೈಸಂಕೇ/ತಾಂ-2/ರೈಸಂಕೇ/ನಿರ್ವಹಣಾ ವೆಚ್ಚ/32/2011-12 ಹಾಗೂ ಪತ್ರ ದಿನಾಂಕ: 11/12-10-2012.

## ಪ್ರಸ್ತಾವನೆ

ಮೇಲೆ ಓದಲಾದ (1) ರ ಆದೇಶದಲ್ಲಿ ರೈತ ಮಿತ್ರ ಯೋಜನೆಯಡಿ ರಾಜ್ಯದ ಪ್ರತಿಯೊಂದು ಹೋಬಳಿಯಲ್ಲಿ ಸ್ಥಾಪಿಸಲಾಗಿರುವ ರೈತ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯವನ್ನು ಪಡೆಯಲು ಪ್ರತಿ ಸೌಲಭ್ಯಗಳಿಗೆ ಸೇವಾ ಶುಲ್ಕವನ್ನು ಪಡೆಯಲು / ವಿಧಿಸಲು ಸರ್ಕಾರದ ಮಂಜೂರಾತಿಯನ್ನು ಕೆಲವು ಷರತ್ತುಗಳೊಂದಿಗೆ ನೀಡಲಾಗಿದೆ. ಸದರಿ ಆದೇಶದಲ್ಲಿ ಠೇವಣಿಯಲ್ಲಿರುವ ಹಣವನ್ನು ಕೇಂದ್ರಗಳ ದೈನಂದಿನ ಚಟುವಟಿಕೆಗಳಿಗೆ ಅವಶ್ಯವಿರುವ ಅಂದರೆ ಬೀಜ ಮತ್ತು ಮಣ್ಣು ಮಾದರಿಗಳ ಪರೀಕ್ಷೆಗಾಗಿ ಬೇಕಾಗಿರುವ ಪರಿಕರಗಳನ್ನು ಕೊಳ್ಳಲು ಹಾಗೂ ಈ ರೈತ ಸಂಪರ್ಕ ಕೇಂದ್ರಗಳು ಸರ್ಕಾರದ / ಇಲಾಖೆಯ ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಲ್ಲಿ ಅವುಗಳ ರಿಪೇರಿ / ನಿರ್ವಹಣೆಗಾಗಿ ವಾರ್ಷಿಕ 25.000/- ರೂ.ಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ 1999 ರಲ್ಲಿನ ನಿಯಮಗಳ ಪ್ರಕಾರ ವೆಚ್ಚ ಮಾಡಲು ಆದೇಶಿಸಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಕೃಷಿ ನಿರ್ದೇಶಕರು ಪ್ರಸ್ತುತ ರೈತ ಸಂಪರ್ಕ ಕೇಂದ್ರಗಳ ನಿರ್ವಹಣಾ ವೆಚ್ಚ ಹೆಚ್ಚಾಗಿರುವುದರಿಂದ ಹಾಗೂ ರೂ. 25.000/-ಗಳ ಮಿತಿಯನ್ನು ಹತ್ತು ವರ್ಷಗಳ ಹಿಂದೆ ನಿಗದಿ ಮಾಡಿರುವ ಹಿನ್ನೆಲೆಯಲ್ಲಿ ರೈತ ಸಂಪರ್ಕ ಕೇಂದ್ರಗಳ ನಿರ್ವಹಣೆಗಾಗಿ ವೆಚ್ಚವನ್ನು ವಾರ್ಷಿಕ ರೂ. 25.000/- ಗಳಿಂದ ರೂ. 50.000/- ಗಳಿಗೆ ಹೆಚ್ಚಿಸಲು ಹಾಗೂ ರೈತ ಸಂಪರ್ಕ ಕೇಂದ್ರದಲ್ಲಿ ಸಂಗ್ರಹಣೆಯಾಗುವ ಮೊತ್ತದಿಂದ ರೈತ ಸಂಪರ್ಕ ಕೇಂದ್ರಗಳ ನಿರ್ವಹಣೆಗಾಗಿ ಹಂಗಾಮುಗಳಲ್ಲಿ ನಿಯಾಮಾನುಸಾರ ನೇಮಕ ಮಾಡಿಕೊಳ್ಳುವ ಸಿಬ್ಬಂದಿಗಳಿಗೆ ವೇತನವನ್ನು ಪಾವತಿಸಲು ಅನುಮತಿಸಿ ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ

2

# ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಕೃತೋಇ/116/ಕೃಯೋಕಾ/2001, ದಿ: 17-05-2001 ರಲ್ಲಿನ ಷರತ್ತು 2 ರಲ್ಲಿ ನಿಗಧಿಪಡಿಸಿರುವ ರೈತ ಸಂಪರ್ಕ ಕೇಂದ್ರಗಳ ನಿರ್ವಹಣಾ ವೆಚ್ಚವನ್ನು ವಾರ್ಷಿಕ ರೂ. 25.000/- ದಿಂದ ರೂ. 50.000/-ಗಳಿಗೆ ಪರಿಷ್ಕರಿಸಿ ಆದೇಶಿಸಿದೆ. ಈ ವೆಚ್ಚವನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ಸಂಗ್ರಹಣೆಯಾಗುವ ಸೇವಾ ಶುಲ್ಕದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD/381/Exp-4/2012. ದಿ: 01-03-2013 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ.ಆರ್. ವಿಶ್ವನಾಥಾಚಾರ್)
ಸರ್ಕಾರದ ಅಧೀನ ಕಾರ್ಯದರ್ಶಿ.
ಕೃಷಿ ಇಲಾಖೆ (ಯೋಜನೆ)

ಇವರಿಗೆ,

1. ಮಹಾಲೇಖಪಾಲರು, (ಲೆಕ್ಕ ಪತ್ರ ಮತ್ತು ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ~~ರಾಜ್ಯ ಹುಜೂರು~~ ಖಜಾನೆ, ಬೆಂಗಳೂರು.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃತೋ. ಮತ್ತು ಪ.ಸ.ಮೀ. ಇಲಾಖೆ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು